# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | 391 |
| ಸದಸ್ಯರ ಹೆಸರು | ಡಾ: ಯತೀಂದ್ರ .ಎಸ್.<br>(ವಿಧಾನ ಸಭೆಯಿಂದ ಚುನಾಯಿತರಾದವರು |
| ಉತ್ತರಿಸಬೇಕಾದ ದಿನಾಂಕ | 13-08-2025<br>(ಕಂದಾಯ ಇಲಾಖೆಯಿಂದ ವರ್ಗಾವಣೆಯಾಗಿರುತ್ತದೆ) |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹಿಂದುಳಿದ ವರ್ಗಗಳ ಪ್ರವರ್ಗ-1 ಮತ್ತು 2ಎ ಸಮುದಾಯಗಳಿಗೆ ಸಿವಿಲ್ ಗುತ್ತಿಗೆ ಕಾಮಗಾರಿಗಳಲ್ಲಿ ರೂ.1.00 ಕೋಟಿಯವರಿಗೆ ಮೀಸಲಾತಿ ನೀಡಿ ಸರ್ಕಾರದ ಆದೇಶವನ್ನು ಹೊರಡಿಸಲಾಗಿರುವುದು ನಿಜವೇ; | ಹೌದು. |
| ಆ) | ಹಾಗಿದ್ದಲ್ಲಿ, ಪ್ರವರ್ಗಗಳಿಗೆ ಗುತ್ತಿಗೆಯಲ್ಲಿ ಮೀಸಲಾತಿಯನ್ನು ಪಡೆಯಲು ಆದಾಯದ ಮಿತಿ ಪರಿಗಣಿಸದೆ ಈ ಪ್ರವರ್ಗಗಳ ಜನರು ಕಂದಾಯ ಇಲಾಖೆಯ ತಹಶೀಲ್ದಾರ್ ಕಛೇರಿಗೆ ಭೇಟಿ ನೀಡಿ ಕೇವಲ ಜಾತಿಯನ್ನು ನಮೂದಿಸಿ, ಪ್ರವರ್ಗ-1 ಮತ್ತು 2ಎ ಗೆ ಜಾತಿ ಪ್ರಮಾಣ ಪತ್ರವನ್ನು ಕೊಡಲು ತಹಶೀಲ್ದಾರ್ ಕಛೇರಿಗಳಲ್ಲಿ ಆದಾಯವನ್ನು ನಮೂದಿಸದೇ ಕೇವಲ ಜಾತಿ ಪ್ರಮಾಣ ಪತ್ರವನ್ನು ಸದರಿ ವರ್ಗಗಳಿಗೆ ಕೊಡಲು ಸಾಧ್ಯವಿಲ್ಲವೆಂದು ತಿಳಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ದಿನಾಂಕ:30-03-2002ರ ಅನುಬಂಧ-I ರಲ್ಲಿನ ಪ್ರವರ್ಗ-1 ಮತ್ತು ಪ್ರವರ್ಗ-2(ಎ) ಜಾತಿಯ ಸಿವಿಲ್ ಗುತ್ತಿಗೆದಾರರಿಗೆ / ಉದ್ಯಮಿಗಳಿಗೆ ವಿನಾಯಿತಿ ಪಡೆಯಲು 'ನಮೂನೆ-ಐ' ರಲ್ಲಿ ಪ್ರಪತ್ರವನ್ನು ನಿಗದಿಪಡಿಸಿ ದಿನಾಂಕ: 29-07-2025ರಂದು ಕಂದಾಯ ಇಲಾಖೆಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಲಾಗಿದೆ. |
| ಇ) | ಬಂದಿದ್ದಲ್ಲಿ, ಸದರಿ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು (ವಿವರ ಒದಗಿಸುವುದು) ? | |

ಸಂಖ್ಯೆ: ಹಿಂವಕ 295 ಬಿಎಂಎಸ್ 2025

(ಶಿವರಾಜ ಎಸ್. ತಂಗಡಗಿ)
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.